# ಕರ್ನಾಟಕ ವಿಧಾನ ಪರಿಷತ್ತು

| | |
|---|---|
| ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ | 1170 |
| ಮಾನ್ಯ ಸದಸ್ಯರ ಹೆಸರು | ಶ್ರೀ ವೈ.ಎಂ. ಸತೀಶ್<br>(ಸ್ಥಳೀಯ ಸಂಸ್ಥೆಗಳ ಕ್ಷೇತ್ರ) |
| ಉತ್ತರಿಸಬೇಕಾದ ದಿನಾಂಕ | 17.12.2025 |
| ಉತ್ತರಿಸುವ ಸಚಿವರು | ಕಂದಾಯ ಸಚಿವರು |

| ಕ್ರ. ಸಂ. | ಪ್ರಶ್ನೆ | ಉತ್ತರ |
|---|---|---|
| ಅ) | ಬಳ್ಳಾರಿ ಮತ್ತು ವಿಜಯನಗರ ಜಿಲ್ಲೆಗಳಲ್ಲಿರುವ ಭೂದಾಖಲೆಗಳ ಸಹಾಯಕ ನಿರ್ದೇಶಕರ ಹುದ್ದೆಗಳ ಸಂಖ್ಯೆ ಎಷ್ಟು; | ಬಳ್ಳಾರಿ ಮತ್ತು ವಿಜಯನಗರ ಜಿಲ್ಲೆಗಳಲ್ಲಿನ ಭೂದಾಖಲೆಗಳ ಸಹಾಯಕ ನಿರ್ದೇಶಕರ ಹುದ್ದೆಗಳ ವಿವರ ಕೆಳಕಂಡಂತಿದೆ:- (ಕೆಳಗಿನ ಕೋಷ್ಟಕ) |

| ತಾಲ್ಲೂಕು | ಮಂಜೂರು | ಭರ್ತಿ | ಖಾಲಿ |
|---|---|---|---|
| **ಬಳ್ಳಾರಿ ಜಿಲ್ಲೆ** | | | |
| ಬಳ್ಳಾರಿ | 01 | 01 | 00 |
| ಭೂ.ಸ.ನಿ. ಸಿರಗುಪ್ಪ | 01 | 01 | 00 |
| ಭೂ.ಸ.ನಿ. ಸಂಡೂರು | 01 | 00 | 01 |
| ನಗರಮಾಪನ ಯೋಜನಾಧಿಕಾರಿಗಳ ಕಛೇರಿ, ಬಳ್ಳಾರಿ | 01 | 00 | 01 |
| **ಒಟ್ಟು** | **04** | **02** | **02** |
| **ವಿಜಯನಗರ ಜಿಲ್ಲೆ** | | | |
| ಭೂ.ಸ.ನಿ. ಹೊಸಪೇಟೆ | 01 | 01 | 00 |
| ಭೂ.ಸ.ನಿ. ಕೂಡ್ಲಗಿ | 01 | 00 | 01 |
| ಭೂ.ಸ.ನಿ. ಹಗರಿಬೊಮ್ಮನಹಳ್ಳಿ | 01 | 01 | 00 |
| ಭೂ.ಸ.ನಿ. ಹಡಗಲಿ | 01 | 01 | 00 |
| ಭೂ.ಸ.ನಿ. ಹರಪ್ಪನಹಳ್ಳಿ | 01 | 01 | 00 |
| **ಒಟ್ಟು** | **05** | **04** | **01** |

| ಕ್ರ. ಸಂ. | ಪ್ರಶ್ನೆ | ಉತ್ತರ |
|---|---|---|
| ಆ) | ಈ ಜಿಲ್ಲೆಗಳಲ್ಲಿ ಕಾರ್ಯ ನಿರ್ವಹಿಸುತ್ತಿರುವ ಹಾಗೂ ಖಾಲಿ ಇರುವ ಭೂದಾಖಲೆಗಳ ಸಹಾಯಕ ನಿರ್ದೇಶಕರ ಹುದ್ದೆಗಳೆಷ್ಟು; ಬಳ್ಳಾರಿ ನಗರದಲ್ಲಿ ಭೂದಾಖಲೆಗಳ ಸಹಾಯಕ ನಿರ್ದೇಶಕರ ಹುದ್ದೆ ಎಷ್ಟು ವರ್ಷಗಳಿಂದ ಖಾಲಿ ಇದೆ; | ಬಳ್ಳಾರಿ ಜಿಲ್ಲೆಯ ಸಂಡೂರು ತಾಲ್ಲೂಕು, ನಗರಮಾಪನ ಯೋಜನಾಧಿಕಾರಿಗಳ ಕಛೇರಿ, ಬಳ್ಳಾರಿ ಹಾಗೂ ವಿಜಯ ನಗರ ಜಿಲ್ಲೆಯ ಕೂಡ್ಲಗಿ ತಾಲ್ಲೂಕಿನಲ್ಲಿ 2024ನೇ ಸಾಲಿನಿಂದ ಭೂದಾಖಲೆಗಳ ಸಹಾಯಕ ನಿರ್ದೇಶಕರ ಹುದ್ದೆಗಳು ಖಾಲಿ ಇದ್ದು, ಇಲಾಖೆಯಲ್ಲಿ ಭೂದಾಖಲೆಗಳ ಸಹಾಯಕ ನಿರ್ದೇಶಕರ ಹುದ್ದೆಯ ಕೊರತೆ ಇರುವುದರಿಂದ ಸದರಿ ತಾಲ್ಲೂಕುಗಳಲ್ಲಿ ಪ್ರಭಾರ ವ್ಯವಸ್ಥೆಯನ್ನು ಮಾಡಿ ಸಾರ್ವಜನಿಕ ಸೇವೆ ನೀಡಲಾಗಿರುತ್ತದೆ. |
| ಇ) | ಭೂದಾಖಲೆಗಳ ಸಹಾಯಕ ನಿರ್ದೇಶಕರ ಹುದ್ದೆಯ ಕಾರ್ಯಗಳೇನು; | ಭೂಮಾಪನ, ಕಂದಾಯ ವ್ಯವಸ್ಥೆ ಮತ್ತು ಭೂದಾಖಲೆಗಳ ಇಲಾಖೆಗೆ ಸಂಬಂಧಿಸಿದಂತೆ ಕರ್ನಾಟಕ ಭೂ ಕಂದಾಯ ಅಧಿನಿಯಮ 1964 ಮತ್ತು ಕರ್ನಾಟಕ ಭೂ ಕಂದಾಯ ನಿಯಮಾವಳಿಗಳು 1966 ಇದರನ್ವಯ ನಿರ್ವಹಿಸಬೇಕಾದ ಎಲ್ಲಾ ಕೆಲಸಗಳನ್ನು ತಾಲ್ಲೂಕು ಮಟ್ಟದಲ್ಲಿ ನಿರ್ವಹಿಸುವ ಜವಾಬ್ದಾರಿಯು ಭೂದಾಖಲೆಗಳ ಸಹಾಯಕ ನಿರ್ದೇಶಕರದ್ದಾಗಿರುತ್ತದೆ. |

| | | |
|---|---|---|
| | | ಈ ಬಗ್ಗೆ ಸರ್ಕಾರದ ಸುತ್ತೋಲೆ ಸಂಖ್ಯೆ: ಕಂಇ 187 ಭೂದಾಸ 2013, ದಿನಾಂಕ:05.12.2013ರಲ್ಲಿ ಭೂದಾಖಲೆಗಳ ಸಹಾಯಕ ನಿರ್ದೇಶಕರ ಹುದ್ದೆಯ ಕರ್ತವ್ಯ ಹಾಗೂ ಜವಾಬ್ದಾರಿಗಳನ್ನು ಪುನರುಚ್ಚರಿಸಲಾಗಿದೆ. |
| ಈ) | ಭೂದಾಖಲೆಗಳ ಸಹಾಯಕ ನಿರ್ದೇಶಕರಿಗೆ ಸೂಕ್ತ ಕಛೇರಿ ಲಭ್ಯವಿದೆಯೇ; ಹಾಲಿ ಇರುವ ಭೂದಾಖಲೆಗಳ ಸಹಾಯಕ ನಿರ್ದೇಶಕರ ಕಛೇರಿ ದುಸ್ಥಿತಿಯಲ್ಲಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ; | ರಾಜ್ಯದಲ್ಲಿ ಎಲ್ಲಾ ತಾಲ್ಲೂಕುಗಳಲ್ಲಿ ಭೂದಾಖಲೆಗಳ ಸಹಾಯಕ ನಿರ್ದೇಶಕರ ಕಚೇರಿಗಳನ್ನು ತಾಲ್ಲೂಕು ಕಛೇರಿಯ ಮುಖ್ಯ ಕಟ್ಟಡಗಳಲ್ಲಿಯೇ ಸ್ಥಾಪಿಸಲಾಗಿದೆ.<br><br>ಸದರಿ ಕಛೇರಿಗಳು ಸುಸ್ಥಿತಿಯಲ್ಲಿದ್ದು, ಕಾಲಕಾಲಕ್ಕೆ ಅಗತ್ಯವಿರುವ ಮೂಲಭೂತ ಸೌಕರ್ಯಗಳನ್ನು ಒದಗಿಸಲಾಗುತ್ತಿದೆ. |
| ಉ) | ನೂತನ ಕಛೇರಿ ಒದಗಿಸಲು ಸರ್ಕಾರದಿಂದ ಯಾವ ಕ್ರಮ ಕೈಗೊಳ್ಳಲಾಗುವುದು? | ರಾಜ್ಯದಲ್ಲಿ ರಚಿಸಲಾದ ಹೊಸ ತಾಲ್ಲೂಕುಗಳಲ್ಲಿ ಭೂದಾಖಲೆಗಳ ಸಹಾಯಕ ನಿರ್ದೇಶಕರ ಕಛೇರಿಗಳನ್ನು ಪ್ರಾರಂಭಿಸುವ ಕುರಿತು ಆರ್ಥಿಕ ಇಲಾಖೆಯು ಪ್ರಸ್ತಾವನೆಯನ್ನು ಮುಂದೂಡುವಂತೆ ಅಭಿಪ್ರಾಯ ನೀಡಿದ್ದು, ಆರ್ಥಿಕ ಇಲಾಖೆಯು ಸಹಮತಿ ನೀಡಿದ್ದಲ್ಲಿ ಭೂದಾಖಲೆಗಳ ಸಹಾಯಕ ನಿರ್ದೇಶಕರ ಕಛೇರಿಗಳನ್ನು ಪ್ರಾರಂಭಿಸಲು ಕ್ರಮವಹಿಸಲಾಗುತ್ತದೆ. |

**ಸಂಖ್ಯೆ: ಕಂಇ 238 ಎಸ್‌ಎಸ್‌ಸಿ 2025**

**(ಕೃಷ್ಣ ಬೈರೇಗೌಡ)**
ಕಂದಾಯ ಸಚಿವರು